# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ, ವಾರ್ಡ್–95, ಸುಭಾಷ್‌ನಗರ

ನೀಲಿಗಿರಿ ಪಾಪಣ್ಣ ಬ್ಲಾಕ್, ಶ್ರೀರಾಮಪುರ, ಬೆಂಗಳೂರು–560021


ಸಂಖ್ಯೆ:ಸ.ಅ/ವಾ–95/ಪಿಆರ್/420/2021–22 ದಿನಾಂಕ:–17–01–2022

## ಸಭಾ ಸೂಚನಾ ಪತ್ರ

ವಿಷಯ:– ವಾರ್ಡ್–95 ಸುಭಾಷ್‌ನಗರ ವಾರ್ಡ್ ಸಮಿತಿ ಸಭೆಯನ್ನು ಏರ್ಪಡಿಸಿರುವ ಬಗ್ಗೆ.

===***===

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಆದೇಶದಂತೆ ವಾರ್ಡ್–95 ಸುಭಾಷ್‌ನಗರ ವಾರ್ಡ್ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿ: 19–01–2022 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ಕಛೇರಿ ಮೈಸೂರು ಡಿವಿಯೇಷನ್ ರಸ್ತೆ, ಕಸ್ತೂರಿನಗರ, ಅಂಗಳಪರಮೇಶ್ವರಿ ದೇವಸ್ಥಾನ ಹತ್ತಿರ ಪ್ರೆಸ್ಟೀಜ್ ಅಪಾರ್ಟ್‌ಮೆಂಟ್ಸ್ ಎದುರು, ಬೆಂಗಳೂರು–23. ಇಲ್ಲಿ ಏರ್ಪಡಿಸಲಾಗಿದ್ದು, ತಾವುಗಳು ಸಾರ್ವಜನಿಕ ಕುಂದು ಕೊರತೆಗಳನ್ನು ಚರ್ಚಿಸಲು ಈ ಸಭೆಗೆ ತಪ್ಪದೇ ಹಾಜರಾಗಲು ಕೋರಲಾಗಿದೆ.

ಸಭೆಯಲ್ಲಿ ಚರ್ಚಿಸುವ ವಿಷಯಗಳು

1. ಕೋವಿಡ್–19ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ.
2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ.
3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.
4. ವಾರ್ಡ್–95 ವ್ಯಾಪ್ತಿಯಲ್ಲಿನ ಬೀದಿ ದೀಪಗಳು ಸಂಬಂಧಿಸಿದ ವಿಷಯದ ಬಗ್ಗೆ.
5. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.
6. ಪಾಲಿಕೆ ವತಿಯಿಂದ ಬೀದಿ ಬೀದಿ ವ್ಯಾಪಾರಿಗಳಿಗೆ ಸಾಲ ಭಾಗ್ಯ ಲಭ್ಯವಿದ್ದು ಜನರಿಗೆ ಅರಿವು ಮೂಡಿಸಿ ಅವರನ್ನು ಸಾಲ ಸೌಲಭ್ಯ ಯೋಜನೆಗೆ ನೊಂದಾಯಿಸಿಕೊಳ್ಳಲು ಸಂಬಂಧಿಸಿದ ವಿಷಯದ ಬಗ್ಗೆ.
7. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ.
8. ವಿದ್ಯುತ್ ಸರಬರಾಜು (ಬೆಸ್ಕಾಂಗೆ) ಸಂಬಂಧಿಸಿದ ವಿಷಯದ ಬಗ್ಗೆ.
9. ಅಧ್ಯಕ್ಷರ ಸೂಚನೆಯಂತೆ ಇನ್ನಿತರೆ ವಿಷಯಗಳು.

ವಾರ್ಡ್ ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–95

ಪ್ರತಿಯನ್ನು

1. ಜಂಟಿ ಆಯುಕ್ತರು, ಪಶ್ಚಿಮ ವಲಯ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು ಗಾಂಧಿನಗರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
6. ಕಛೇರಿಯ ಕಡತಕ್ಕೆ.